# All India Radio: Bangalore
# Regional Bulletin In Kannada
# 15.07.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 15.07.2025 / 2.30 p.m.

<><><><>

ಮುಖ್ಯಾಂಶಗಳು

- ದೇವನಹಳ್ಳಿಯಲ್ಲಿ ೧ ಸಾವಿರದ ೭೭೭ ಎಕರೆ ಭೂಸ್ವಾದೀನ ಪ್ರಕ್ರಿಯೆ ರದ್ದುಗೊಳಿಸಿ ಸರ್ಕಾರ ಆದೇಶ
- ರಾಜ್ಯದಲ್ಲಿ ಅನುಮತಿ ಇಲ್ಲದೇ ಉಳಿದಿರುವ ವಿದೇಶಿಗರ ಗಡಿಪಾರು : ಗೃಹ ಸಚಿವ ಡಾ. ಜಿ. ಪರಮೇಶ್ವರ್ ಎಚ್ಚರಿಕೆ
- ಪರಿಸರ ಸ್ನೇಹಿ ತ್ಯಾಜ್ಯ ನಿರ್ವಹಣೆಯಲ್ಲಿ ದಾವಣಗೆರೆ ಮಹಾನಗರ ಪಾಲಿಕೆ ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ
- ಇಂದು ಮಧ್ಯಾಹ್ನ ಹಿರಿಯ ನಟಿ. ಬಿ. ಸರೋಜಾದೇವಿ ಅಂತ್ಯಕ್ರಿಯೆ : ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಅಂತಿಮ ನಮನ

<><><><>

ದೇವನಹಳ್ಳಿ ತಾಲೂಕು ಚನ್ನರಾಯಪಟ್ಟಣ ಹಾಗೂ ಇತರ ಗ್ರಾಮಗಳಲ್ಲಿನ ಒಂದು ಸಾವಿರದ ೭೭೭ ಎಕರೆ ಭೂಸ್ವಾಧೀನ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಕೈಬಿಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ವಿಧಾನಸೌಧದಲ್ಲಿಂದು ರೈತರ ಜೊತೆ ಮಾತುಕತೆಯ ಬಳಿಕ ಅವರು, ಈ ನಿರ್ಧಾರ ಪ್ರಕಟಿಸಿದ್ದಾರೆ. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಜಮೀನು ನೀಡಲು ಇಚ್ಛಿಸುವವರ ಭೂಮಿಯನ್ನು ಸರ್ಕಾರ ಸ್ವಾಧೀನಪಡಿಸಿಕೊಳ್ಳಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಅವರಿಗೆ ಹೆಚ್ಚಿನ ಪರಿಹಾರ ಹಾಗೂ ಹೆಚ್ಚಿನ ವಿಸ್ತೀರ್ಣದ ಅಭಿವೃದ್ಧಿಪಡಿಸಿದ ನಿವೇಶನ ನೀಡಲಾಗುವುದು ಎಂದು ಹೇಳಿದ್ದಾರೆ.

**ಧ್ವನಿ : ಮುಖ್ಯಮಂತ್ರಿ**

ದೇವನಹಳ್ಳಿ ತಾಲೂಕಿನಲ್ಲಿ ಜಮೀನು ಸ್ವಾಧೀನಪಡಿಸಿ ಏರೋಸ್ಪೇಸ್ ಆರಂಭಿಸುವುದು ಸರ್ಕಾರದ ಉದ್ದೇಶವಾಗಿತ್ತು. ಇಂದಿನ ಸಭೆಯಲ್ಲಿ ಸಚಿವರಾದ ಎಂ.ಬಿ. ಪಾಟೀಲ್, ಕೆ.ಹೆಚ್. ಮುನಿಯಪ್ಪ, ಹೆಚ್.ಕೆ. ಪಾಟೀಲ್, ಕೃಷ್ಣಬೈರೇಗೌಡ, ಪ್ರಿಯಾಂಕ್‌ಖರ್ಗೆ ಸೇರಿದಂತೆ ಹಲವರು ಭಾಗವಹಿಸಿದ್ದರು.

<><><><>

ರಾಜ್ಯದಲ್ಲಿ ಅನುಮತಿ ಇಲ್ಲದೇ ಯಾರಾದರೂ ವಿದೇಶಿಗರು ಉಳಿದುಕೊಂಡಿರುವುದು ಕಂಡುಬಂದರೆ ಅವರನ್ನು ಗಡಿಪಾರು ಮಾಡಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ಕರ್ನಾಟಕದಲ್ಲಿ ೧೦ ಸಾವಿರಕ್ಕೂ ಹೆಚ್ಚು ಮಂದಿ

ವಲಸಿಗರಿದ್ದು, ಅವರ ವಿರುದ್ಧ ನಿಗಾ ಇಡಲಾಗಿದೆ ಎಂದು ಹೇಳಿದ್ದಾರೆ. ವಿದೇಶಿಗರ ಪ್ರಕರಣವನ್ನು ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ ನಿರ್ವಹಿಸುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ನಗರ ಸ್ವಚ್ಛತೆಯಲ್ಲಿನ ಅತ್ಯುತ್ತಮ ಸಾಧನೆಗಳಿಗಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಇದೇ ೧೭ ರಂದು ನವದೆಹಲಿಯಲ್ಲಿ ಸ್ವಚ್ಛ ಸರ್ವೇಕ್ಷಣಾ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಸ್ವಚ್ಛ ಭಾರತ ಮಿಷನ್ ಭಾಗವಾಗಿರುವ ಈ ಪ್ರಶಸ್ತಿಗಳು ನೈರ್ಮಲ್ಯ ಮತ್ತು ಸಾರ್ವಜನಿಕ ನೈರ್ಮಲ್ಯಕ್ಕೆ ಅಸಾಧಾರಣ ಬದ್ಧತೆಯನ್ನು ಪ್ರದರ್ಶಿಸಿದ ನಗರಗಳನ್ನು ಆಯ್ಕೆ ಮಾಡಲಾಗುತ್ತದೆ. ಇಂದೋರ್ ಸತತ ೮ನೇ ಬಾರಿಗೆ ಸೂಪರ್ ಸ್ವಚ್ಛ ಲೀಗ್‌ನಲ್ಲಿ ಮುಂಚೂಣಿಯಲ್ಲಿದೆ.

<><><><>

ಪರಿಸರ ಸ್ನೇಹಿ ತ್ಯಾಜ್ಯ ನಿರ್ವಹಣೆ ಮತ್ತು ಮರುಬಳಕೆ ಹಾಗೂ ಸ್ವಚ್ಛತೆಗಾಗಿ ಕೇಂದ್ರ ಸರ್ಕಾರದ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ನೀಡುವ ೨೦೨೪-೨೫ನೇ ಸಾಲಿನ ರಾಷ್ಟ್ರ ಮಟ್ಟದ ಸಚಿವಾಲಯದ ಪ್ರಶಸ್ತಿಗೆ ದಾವಣಗೆರೆ ಮಹಾನಗರ ಪಾಲಿಕೆ ಆಯ್ಕೆಗೊಂಡಿದೆ. ಮೂಲದಲ್ಲಿಯೆ ಹಸಿ ಮತ್ತು ಒಣಕಸ ಬೇರ್ಪಡಿಸುವಿಕೆ, ಮರುಬಳಕೆ ಸೇರಿದಂತೆ ವಿವಿಧ ಮಾನದಂಡಗಳನ್ನು ಆಧರಿಸಿ ನೀಡುವ ಈ ಪ್ರಶಸ್ತಿಗೆ ದಾವಣಗೆರೆ ಮಹಾನಗರ ಪಾಲಿಕೆ ಆಯ್ಕೆಗೊಂಡಿದ್ದು, ಇದೇ ಜುಲೈ ೧೭ ರಂದು ನವದೆಹಲಿಯ ವಿಜ್ಞಾನ ಭವನದಲ್ಲಿ ಪ್ರಶಸ್ತಿ ಪ್ರದಾನ ನಡೆಯಲಿದೆ. ಈ ಕುರಿತು ಮಹಾನಗರ ಪಾಲಿಕೆ ಆಯುಕ್ತರಾದ ಶ್ರೀಮತಿ ರೇಣುಕಾ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ : ರೇಣುಕಾ ಆಯುಕ್ತೆ**

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ಮನ್ ಕಿ ಬಾತ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ ೨೭ರ ಭಾನುವಾರದಂದು ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೪ನೇ ಆವೃತ್ತಿಯಾಗಿದೆ. ಕಾರ್ಯಕ್ರಮಕ್ಕೆ ನಿಮ್ಮ ಅಗತ್ಯ, ಸಲಹೆ, ಅಭಿಪ್ರಾಯಗಳನ್ನು ೧೮೦೦-೧೧-೭೮೦೦ ಗೆ ಕರೆ ಮಾಡಬಹುದು. ಇಲ್ಲವೇ ನಮೋ ಆಪ್ ಅಥವಾ ಮೈ ಗೌವ್ ಡಾಟ್ ಇನ್ ವೇದಿಕೆಯ ಮೂಲಕ ಹಂಚಿಕೊಳ್ಳಬಹುದು.

<><><><>

ಇಹಲೋಕ ತ್ಯಜಿಸಿದ ಕನ್ನಡದ ಹಿರಿಯ ನಟಿ ಬಿ.ಸರೋಜಾದೇವಿ ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆ ಇಂದು ಮಧ್ಯಾಹ್ನ ಚನ್ನಪಟ್ಟಣದ ದಶವಾರದಲ್ಲಿ ನಡೆಯಲಿದೆ. ಬೆಂಗಳೂರಿನ ಮಲ್ಲೇಶ್ವರಂನ ಅವರ ನಿವಾಸದಲ್ಲಿ, ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ, ಜಮೀರ್ ಅಹಮ್ಮದ್‌ಖಾನ್ ಸೇರಿದಂತೆ ಚಲನಚಿತ್ರದ ಹಲವು ಗಣ್ಯರು ಅಂತಿಮ ನಮನ ಸಲ್ಲಿಸಿದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸರೋಜಾದೇವಿ ಅವರ ನಿಧನದಿಂದ ಇಡೀ ಚಿತ್ರರಂಗಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಹೇಳಿದರು.

ಮಲ್ಲೇಶ್ವರಂನ ರಸ್ತೆಯೊಂದಕ್ಕೆ ಅವರ ಹೆಸರನ್ನು ಇಡುವ ಕುರಿತಂತೆ ಬಿಬಿಎಂಪಿಯೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ವಿಧಾನ ಸೌಧದಲ್ಲಿ ವಿಶ್ವ ಯುವ ಕೌಶಲ್ಯ ದಿನಾಚರಣೆ ಹಾಗೂ ವಿಶ್ವ ಕೌಶಲ್ಯ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ ಸಮಾರಂಭ ನಡೆಯಿತು. ಸಮಾರಂಭದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ಶುಶ್ರೂಷಾ ಪರಿಷತ್ತು ವತಿಯಿಂದ ಆಧಾರ್ ಹಾಗೂ ಡಿಜಿಲಾಕರ್ ಇ-ಕೆವೈಸಿ ಮೂಲಕ ಶುಶೂಷಾ ಸಮೂಹದವರಿಗೆ ನೋಂದಣಿ ಪ್ರಮಾಣ ಪತ್ರಗಳನ್ನು ವಿತರಿಸುವ ತಂತ್ರಜ್ಞಾನದ ಲೋಕಾರ್ಪಣೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

<><><>

ಎಐಸಿಸಿ ಹಿಂದುಳಿದ ವರ್ಗಗಳ ರಾಷ್ಟ್ರೀಯ ಸಲಹಾ ಮಂಡಳಿ ಅಸ್ತಿತ್ವಕ್ಕೆ ಬಂದಿದ್ದು, ಈ ಸಲಹಾ ಮಂಡಳಿಯ ಮೊದಲ ಸಭೆ ಇಂದು ಬೆಂಗಳೂರಿನಲ್ಲಿ ನಡೆಯಲಿದೆ. ಹಿಂದುಳಿದ ವರ್ಗಗಳಿಗೆ ಸಾಮಾಜಿಕ ನ್ಯಾಯ ಒದಗಿಸುವುದು ಮತ್ತು ಹಿಂದುಳಿದ ವರ್ಗಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಹುಡುಕುವ ನಿಟ್ಟಿನಲ್ಲಿ ಪ್ರಮುಖ ನಿರ್ಣಯಗಳನ್ನು ಕೈಗೊಳ್ಳುವ ಸಾಧ್ಯತೆ ಇದೆ. ಕೆಪಿಸಿಸಿ ಕಚೇರಿಯಲ್ಲಿ ಇಂದು ಸಂಜೆ ೫ ಗಂಟೆಗೆ ಹಾಗೂ ನಾಡಿದ್ದು ಹೋಟೆಲ್ ಶಾಂಗ್ರಿಲಾದಲ್ಲಿ ಬೆಳಗ್ಗೆ ೧೦ ಗಂಟೆಗೆ ಸಭೆ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ವಿವಿಧ ರಾಜ್ಯಗಳ ಮಾಜಿ ಮುಖ್ಯಮಂತ್ರಿಗಳು, ಕೇಂದ್ರದ ಮಾಜಿ ಸಚಿವರುಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಜೊತೆಗೆ ವಿವಿಧ ರಾಜ್ಯಗಳ ಹಾಲಿ ಮತ್ತು ಮಾಜಿ ಸಚಿವರು, ಸಂಸದರು ಪಾಲ್ಗೊಳ್ಳಲಿದ್ದಾರೆ.

<><><>

ಇತ್ತೀಚೆಗೆ ರಾಜ್ಯಾದ್ಯಂತ ಜರುಗಿದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಹಾವೇರಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಇತ್ಯರ್ಥಕ್ಕೆ ಬಾಕಿ ಇರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿ ಇತ್ಯರ್ಥಕ್ಕೆ ಗುರುತಿಸಲ್ಪಟ್ಟ ೭೪ ಸಾವಿರ ೬೪೧ ಪ್ರಕರಣಗಳಲ್ಲಿ ೫೪ ಸಾವಿರ ೪೯೯ ಪ್ರಕರಣಗಳು ಇತ್ಯರ್ಥಗೊಂಡಿದೆ. ಹಾಗೂ ೪೫ ಲಕ್ಷ ರೂಪಾಯಿ ಮೊತ್ತದ ರಾಜೀ ಸಂದಾನವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಿರಾದಾರ ದೇವಿಂದ್ರಪ್ಪ ಎನ್ ತಿಳಿಸಿದ್ದಾರೆ. ಹಾವೇರಿ ಹಾಗೂ ರಾಣೇಬೆನ್ನೂರು ನ್ಯಾಯಾಲಯದಲ್ಲಿ ತಲಾ ಎರಡು, ಹಾನಗಲ್, ಶಿಗ್ಗಾಂವ ಹಾಗೂ ಸವಣೂರ ನ್ಯಾಯಾಲಯದಲ್ಲಿ ತಲಾ ಒಂದು ಕೌಟುಂಬಿಕ ಪ್ರಕರಣಗಳಲ್ಲಿ ದಂಪತಿಗಳು ರಾಜಿಮಾಡಿಕೊಂಡು ಮತ್ತೆ ಒಂದಾಗಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಜುಲೈ ೧೨ರಂದು ರಂದು ಹಮ್ಮಿಕೊಂಡಿದ್ದ ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿ ಇದ್ದ ೧೭ ಸಾವಿರದ ೯೫೯ ಪ್ರಕರಣಗಳು ಹಾಗೂ ೩ ಲಕ್ಷದ ೪೦ ಸಾವಿರದ ೬೨೪ ವ್ಯಾಜ್ಯ ಪೂರ್ವ ಪ್ರಕರಣಗಳು ಇತ್ಯರ್ಥಗೊಂಡಿವೆ. ವಿವಾಹ ವಿಚ್ಛೇದನ ಪಡೆಯಲು ಪ್ರಕರಣ ದಾಖಲಿಸಿದ್ದ ೧೦ ಜೋಡಿಗಳು

ರಾಜಿ ಸಂಧಾನದ ಮೂಲಕ ಮತ್ತೆ ಒಂದಾಗಿ ವೈವಾಹಿಕ ಜೀವನ ನಡೆಸಲು ಒಪ್ಪಿಕೊಂಡಿದ್ದಾರೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶೈಲ್ ಭೀಮಸೇನ್ ಬಾಗಡಿ ತಿಳಿಸಿದ್ದಾರೆ.

<><><><>

ರಾಜ್ಯದ ಕೆಲವೆಡೆ ಮಳೆಯಾಗುತ್ತಿದೆ.

ಮಂಗಳೂರು ನಗರ ಸೇರಿದಂತೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಕಳೆದ ಎರಡು ದಿನಗಳಿಂದ ಭಾರೀ ಮಳೆಯಾಗುತ್ತಿದ್ದು, ಇಂದು ಕೂಡ ಬೆಳಗ್ಗಿನಿಂದಲೇ ಧಾರಾಕಾರ ಮಳೆ ಸುರಿಯುತ್ತಿದೆ. ಭಾರೀ ಮಳೆಯ ಕಾರಣ ಜಿಲ್ಲೆಯ ಬಂಟ್ವಾಳ ಮತ್ತು ಉಳ್ಳಾಲ ತಾಲೂಕಿನ ಎಲ್ಲಾ ಅಂಗನವಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ರಜೆ ಘೋಷಿಸಲಾಗಿದೆ. ನಿರಂತರ ಮಳೆಯಿಂದಾಗಿ ಜಿಲ್ಲೆಯ ಜೀವನದಿಗಳಾದ ನೇತ್ರಾವತಿ, ಫಲ್ಗುಣಿ, ಕುಮಾರಧಾರ ನದಿಗಳು ಮೈದುಂಬಿ ಹರಿಯುತ್ತಿವೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>